# ಹೊಲಿಗೆ ತರಬೇತಿಗೆ ಅರ್ಜಿ ಆಹ್ವಾನ

ಹೊಲಿಗೆ ತರಬೇತಿ ಪಡೆಯಲು ಇಚ್ಛಿಸುವ 18 ರಿಂದ 45 ವರ್ಷ ವಯೋಮಿತಿಯ ಆಸಕ್ತ ಮಹಿಳೆಯರಿಗೆ ಎಪ್ರಿಲ್ 19 ರಿಂದ ಮೂರು ವಾರಗಳ ಕಾಲ ಹೊಲಿಗೆ ತರಬೇತಿಯನ್ನು ಭಾರತೀಯ ವಿಕಾಸ ಟ್ರಸ್ಟ್, ಮಣಿಪಾಲದಲ್ಲಿ ಹಮ್ಮಿಕೊಳ್ಳಲಾಗಿದೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಡಿಗ್ರಿ ಆಗಿ ಉದ್ಯೋಗ ಇಲ್ಲದವರು, ಶಿಕ್ಷಕಿಯರು, ಇತ್ತೀಚೆಗೆ ಪರೀಕ್ಷೆ ಮುಗಿಸಿದವರು ಹಾಗೂ ಆಸಕ್ತ ಮಹಿಳೆಯರು ಈ ತರಬೇತಿಯ ಸದುಪಯೋಗವನ್ನು ಪಡೆದುಕೊಳ್ಳಬಹುದು. ತರಬೇತಿಯ ಸಮಯದಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ, ಹಾಗೂ ದೂರದವರಿಗೆ ವಸತಿ ವ್ಯವಸ್ಥೆಯನ್ನು ನೀಡಲಾಗುವುದು.

ಅಸಕ್ತ ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಮತ್ತು ವಿದ್ಯಾರ್ಹತೆಯನ್ನು ಬಿಳಿ ಹಾಳೆಯಲ್ಲಿ ಬರೆದು ದಿನಾಂಕ **12.04.2017 ರ ಒಳಗೆ "ಭಾರತೀಯ ವಿಕಾಸ ಟ್ರಸ್ಟ್, "ಅನಂತ," ಪೆರಂಪಳ್ಳಿ, ಅಂಬಾಗಿಲು ರಸ್ತೆ, ಕುಂಜಿಬೆಟ್ಟು ಅಂಚೆ, ಉಡುಪಿ – 576102 ದೂರವಾಣಿ: (0820) 2570263** ಇಲ್ಲಿಗೆ ಕಳುಹಿಸಿಕೊಡಬೇಕು ಎಂದು ಭಾರತೀಯ ವಿಕಾಸ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.